10

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE 3/4/21

# ಪೋಸ್ಟ್‌ಮ್ಯಾನ್ ಅಲ್ಲ

## ಬಹಿರಂಗವಾಗಿ ತಿರುಗಿಬಿದ್ದ ಸಚಿವ ಈಶ್ವರಪ್ಪ

ಬೆಂಗಳೂರು/ ಮೈಸೂರು/ ವಿಜಯಪುರ: 'ನನ್ನ ಇಲಾಖೆಯ ಪೋಸ್ಟ್‌ಮ್ಯಾನ್ ಅಲ್ಲ, ನಾನು ಯಾವುದೇ ತಪ್ಪು ಮಾಡಿಲ್ಲ, ನನ್ನನ್ನು ಸಂಪುಟದಿಂದ ಕೈ ಬಿಟ್ಟರೂ ತಲೆ ಕೆಡಿಸಿಕೊಳ್ಳುವುದಿಲ್ಲ, ನನ್ನ ವಿರುದ್ಧ ಯಾರೇ ರಾಜೀನಾಮೆಗೆ ಆಗ್ರಹಿಸಿದರೂ ನಾನು ಜಗ್ಗುವುದಿಲ್ಲ'



– ಹೀಗೆಂದು ಮುಖ್ಯಮಂತ್ರಿ ಯಡಿಯೂರಪ್ಪ ವಿರುದ್ಧ ರಾಜ್ಯಪಾಲರಿಗೆ ಬರೆದ ಪತ್ರವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿ ರಾಜ್ ಸಚಿವ ಕೆ.ಎಸ್.ಈಶ್ವರಪ್ಪ ಮೈಸೂರಿನಲ್ಲಿ ಸಮರ್ಥಿಸಿಕೊಂಡಿದ್ದಾರೆ.

ಪ್ರತಿ ಇಲಾಖೆಗೆ ಸಚಿವರು ಇರುವುದು ಪೋಸ್ಟ್‌ಮನ್ ಕೆಲಸ ಮಾಡಲು ಅಲ್ಲ, ಎಲ್ಲಾ ಸಚಿವರಿಗೂ ಅವರದ್ದೇ ಆದ ಜವಾಬ್ದಾರಿ ಇರುತ್ತದೆ. ನಮ್ಮ ಇಲಾಖೆಗೆ ಬಂದ ಅನುದಾನ ನಮಗೆ ಗೊತ್ತಿಲ್ಲದೆ ಬಿಡುಗಡೆ ಆಗುವುದು ನಿಯಮಕ್ಕೆ ವಿರುದ್ಧ, ಈ ಪದ್ಧತಿ ಮುಂದುವರೆಯಬಾರದು ಎಂಬ ಕಾರಣಕ್ಕೆ ಈ ತೀರ್ಮಾನಕ್ಕೆ ಬಂದೆ ಎಂದು ಈಶ್ವರಪ್ಪ ಸ್ಪಷ್ಟಪಡಿಸಿದ್ದಾರೆ. ಆದರೂ, ಸಮಸ್ಯೆ ಬಗೆಹರಿಸಿಕೊಂಡು ಸರ್ಕಾರ ಮುನ್ನಡೆಸುತ್ತೇವೆ. ಸಿಎಂ ಬಿಎಸ್‌ವೈ ಮೇಲೆ ನೂರಕ್ಕೆ ನೂರು ನನಗೆ ವಿಶ್ವಾಸವಿದೆ ಎಂದು ಹೇಳಿದ್ದಾರೆ. ನಾನು ಬಂಡಾಯಗಾರ ಇಲ್ಲ, ಬಿಜೆಪಿಗೆ ನಿಷ್ಠನಾಗಿ ಕೆಲಸ ಮಾಡುವಾತ ಎಂದಿದ್ದಾರೆ.

ಈ ನಡುವೆ ಈಶ್ವರಪ್ಪ ಅವರ ನಡೆಯನ್ನು ಬಿಜೆಪಿ ಬಂಡಾಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸ್ವಾಗತಿಸಿದ್ದಾರೆ. ಅಲ್ಲದೇ ಮೇ 2ರೊಳಗೆ ಮುಖ್ಯಮಂತ್ರಿ ಬದಲಾವಣೆಯಾಗದಿದ್ದರೆ ಇನ್ನಷ್ಟು ರಾಜಕೀಯ ಬೆಳವಣಿಗೆಗಳು ನಡೆಯುತ್ತವೆ ಎಂದು ಭವಿಷ್ಯ ನುಡಿದಿದ್ದಾರೆ.

**ದೂರು ನೀಡಿಲ್ಲ:** ಮೈಸೂರಿನಲ್ಲಿ ಮಾತನಾಡಿದ ಸಚಿವ ಕೆ.ಎಸ್. ಈಶ್ವರಪ್ಪ ಅವರು, ಇಲಾಖೆಗೆ ನಿಗದಿಯಾದ ಅನುದಾನವನ್ನು ಕಾನೂನು ಮತ್ತು ನಿಯಮ ಮೀರಿ ವರ್ಗಾಯಿಸದಂತೆ ಕೋರಿದ್ದೇನೆಯೇ ಹೊರತು, ಮುಖ್ಯಮಂತ್ರಿಗಳ ವಿರುದ್ಧ ನಾನು ಯಾವುದೇ ದೂರು ನೀಡಿಲ್ಲಎಂದರು. ನನ್ನ ಗಮನಕ್ಕೆ ಬಾರದೆ ಒಮ್ಮೆ 774 ಕೋಟಿ, ಮತ್ತೊಮ್ಮೆ 460 ಕೋಟಿ ಮತ್ತು ಈಗ ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿಗೆ 65 ಕೋಟಿ ಅನುದಾನ ಬಿಡುಗಡೆ ಮಾಡಲು ಮುಖ್ಯಮಂತ್ರಿಗಳು ಆದೇಶಿಸಿದ್ದರು ಎಂದು ಸಚಿವ ಈಶ್ವರಪ್ಪ ಹೇಳಿದ್ದಾರೆ. ▶ 7ನೇ ಪುಟಕ್ಕೆ

# ಪೋಸ್ಟ್‌ಮ್ಯಾನ್ ಅಲ್ಲ

3/4/21

1ನೇ ಪುಟದಿಂದ > ಈ ವಿಷಯ ತಿಳಿದು ಬಜೆಟ್‌ನಲ್ಲಿ ಘೋಷಣೆಯಾಗಿ ಇಲಾಖೆಗೆ ಬಂದ ಅನುದಾನವನ್ನು ಸಂಬಂಧಿಸಿದ ಸಚಿವರ ಗಮನಕ್ಕೆ ತರದೆ ಕ್ರಿಯಾಯೋಜನೆ ರೂಪಿಸದೆ ಅನುದಾನ ಬಿಡುಗಡೆಗೊಳಿಸಲು ಅವಕಾಶ ಇದೆಯಾ ಎಂದು ಹಣಕಾಸು ಇಲಾಖೆಯ ಹಿರಿಯ ಅಧಿಕಾರಿಗಳನ್ನು ಕೇಳಿದೆ. ಬಳಿಕ ಮುಖ್ಯಮಂತ್ರಿಗಳಿಗೆ ನೇರವಾಗಿ ಈ ಕುರಿತು ಪತ್ರ ಬರೆದೆ, ಅವರಿಂದ ಉತ್ತರ ಬರಲಿಲ್ಲ, ನಂತರ ಪಕ್ಷದ ಉಸ್ತುವಾರಿ ಅರುಣ್‌ಸಿಂಗ್, ಪ್ರಧಾನಿ ಮೋದಿ, ಅಮಿತ್ ಶಾ, ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ. ರವಿ, ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್ ಗಮನಕ್ಕೆ ತಂದಿದ್ದೇನೆ. ಆದರೂ, ಮುಖ್ಯಮಂತ್ರಿಗಳು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಕರೆ ಮಾಡಿ ಹಣ ಬಿಡುಗಡೆಗೊಳಿಸಿದ ಬಳಿಕ ಸಂಬಂಧಿಸಿದ ಸಚಿವರ ಗಮನಕ್ಕೆ ತರುವಂತೆ ಪತ್ರ ಬರೆದಿದ್ದರು. ಇದರ ಆಧಾರದ ಮೇಲೆ ಪ್ರಧಾನ ಕಾರ್ಯದರ್ಶಿಗಳು ಹಣ ಕೂಡ ಬಿಡುಗಡೆಗೊಳಿಸಲು ಆದೇಶಿಸಿದರು. ಈಗ ಅದಕ್ಕೆ ನಾನು ತಡೆ ನೀಡಿದ್ದೇನೆ ಎಂದು ಸಮರ್ಥಿಸಿಕೊಂಡರು.

**ಯಾರದ್ದೋ ಮಾತು ಕೇಳಿದ್ದಾರೆ:** ಮುಖ್ಯಮಂತ್ರಿ ಯಾರೋ ಹೇಳಿಕೊಟ್ಟ ಮಾತು ಕೇಳಲು ಹೋಗಿ ಹೀಗೆ ಮಾಡಿಕೊಂಡಿದ್ದಾರೆ ಎನಿಸುತ್ತಿದೆ. ನನ್ನ ಮತ್ತು ಯಡಿಯೂರಪ್ಪ ಅವರ ನಡುವಿನ ವೈಯಕ್ತಿಕ ಕಾರಣಗಳಿಗೆ ಪತ್ರ ಬರೆದಿಲ್ಲ, ಚುನಾವಣೆ ಬಳಿಕ ಸಮಸ್ಯೆ ಬಗೆಹರಿಸುವುದಾಗಿ ಪಕ್ಷದ ವರಿಷ್ಠರು ತಿಳಿಸಿದ್ದಾರೆ.

> ಈಶ್ವರಪ್ಪ ಯಾವ ವಿಚಾರವಾಗಿ ಪತ್ರ ಬರೆದಿದ್ದಾರೆ ಎಂಬುದು ಗೊತ್ತಿಲ್ಲ. ನಾನು ಅವರೊಂದಿಗೆ ಚರ್ಚೆ ಮಾಡಿಲ್ಲ. ಆದರೆ ನಾವು ಒಂದು ಸರ್ಕಾರವಾಗಿ ಒಗ್ಗಟ್ಟಿನಿಂದ, ಒಮ್ಮತದಿಂದ ಕೆಲಸ ಮಾಡಬೇಕು. ಸಿಎಂ ನಿರ್ದೇಶನ ಪಾಲಿಸಬೇಕು. ಅವರ ಪರಮಾಧಿಕಾರ ಪ್ರಶ್ನಿಸುವುದು ಸಾಧುವೂ ಅಲ್ಲ, ಸೌಜನ್ಯವೂ ಅಲ್ಲ.
>
> • ಗೋವಿಂದ ಕಾರಜೋಳ, ಉಪಮುಖ್ಯಮಂತ್ರಿ

> ಸಿಎಂ ಬಿಎಸ್‌ವೈ ವಿರುದ್ಧ ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್ ಈಶ್ವರಪ್ಪ ಪತ್ರ ಬರೆದಿರುವುದು ಮತ್ತು ಅದನ್ನು ರಾಜ್ಯಪಾಲರಿಗೆ ಕಳಿಸಿರುವುದು ಒಳ್ಳೆಯ ಬೆಳವಣಿಗೆಯಲ್ಲ. ನಾವೆಲ್ಲರೂ ಸಿಎಂ ಮಾರ್ಗದರ್ಶನದಲ್ಲಿ ಕಾರ್ಯ ನಿರ್ವಹಣೆ ಮಾಡುತ್ತಿದ್ದೇವೆ. ಹೀಗಿರುವಾಗ ಈಶ್ವರಪ್ಪ ಸಿಎಂ ವಿರುದ್ಧ ಪತ್ರ ಬರೆದಿರುವುದು ಬೇಸರದ ಸಂಗತಿ. ಸಮಸ್ಯೆಗಳನ್ನು ನಾಲ್ಕು ಗೋಡೆಗಳ ಮಧ್ಯೆ ಚರ್ಚಿಸಿ ಪರಿಹಾರ ಕಂಡುಕೊಳ್ಳಬೇಕು.
>
> • ಜಗದೀಶ್ ಶೆಟ್ಟರ್, ಕೈಗಾರಿಕಾ ಸಚಿವ